# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 361 |
| ಮಾನ್ಯ ವಿಧಾನ ಪರಿಷತ್ತು ಸದಸ್ಯರ ಹೆಸರು | ಶ್ರೀ ಮರಿತಿಬ್ಬೇಗೌಡ |
| ಉತ್ತರಿಸಬೇಕಾದ ದಿನಾಂಕ | 07.07.2023 |
| ಉತ್ತರಿಸುವ ಸಚಿವರು | ಮಾನ್ಯ ಸಮಾಜ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ | 2017-18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಕ್ರೈಸ್ ವತಿಯಿಂದ ನಡೆಯುವ 30 ವಸತಿ ಶಾಲೆಗಳನ್ನು ಉನ್ನತೀಕರಿಸಿ, ಪದವಿಪೂರ್ವ ತರಗತಿಗಳನ್ನು ಪ್ರಾರಂಭಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | 2017-18 ನೇ ಸಾಲಿನ ಆಯವ್ಯಯ ಭಾಷಣದಂತೆ 30 ಮೊರಾರ್ಜಿ ವಸತಿ ಶಾಲೆಗಳನ್ನು ವಿಜ್ಞಾನ ಮತ್ತು ಗಣಿತ ವಿಷಯಗಳೊಂದಿಗೆ ಪದವಿಪೂರ್ವ ತರಗತಿಗಳಿಗೆ ಉನ್ನತೀಕರಿಸಿ ಪ್ರಾರಂಭಿಸಲು ಆದೇಶ ಹೊರಡಿಸಲಾಗಿದೆ. |
| ಆ | ಹಾಗಿದ್ದಲ್ಲಿ, ಸದರಿ ತರಗತಿಗಳಿಗೆ ಖಾಯಂ ಉಪನ್ಯಾಸಕರ ಹುದ್ದೆಗಳನ್ನು ಮಂಜೂರು ಮಾಡದಿರಲು ಕಾರಣಗಳೇನು; | 10 ಉನ್ನತೀಕರಿಸಿದ ವಸತಿ ಶಾಲೆಗಳಿಗೆ ಪ್ರತಿ ಶಾಲೆಗೆ 09 ಬೋಧಕ/ಬೋಧಕೇತರ ಹುದ್ದೆಗಳನ್ನು ಮಂಜೂರು ಮಾಡಲಾಗಿದೆ.<br>ಉಳಿದ 20 ಉನ್ನತೀಕರಿಸಿದ ವಸತಿ ಶಾಲೆಗಳಿಗೆ ಹುದ್ದೆಗಳನ್ನು ಮಂಜೂರು ಮಾಡುವ ಪ್ರಸ್ತಾವನೆಯು ಆರ್ಥಿಕ ಇಲಾಖೆಯ ಪರಿಶೀಲನೆಯಲ್ಲಿದೆ. |
| ಇ | 2019-20ನೇ ಸಾಲಿನ ಆಯವ್ಯಯದಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳನ್ನು ಮೇಲ್ದರ್ಜೆಗೇರಿಸಿ, ಪದವಿಪೂರ್ವ ವಿಭಾಗದಲ್ಲಿ ವಿಜ್ಞಾನ ಮತ್ತು ವಾಣಿಜ್ಯ ಕೋರ್ಸ್‌ಗಳನ್ನು ಪ್ರಾರಂಭಿಸಲು ಘೋಷಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | 2019-20 ನೇ ಸಾಲಿನ ಆಯವ್ಯಯದಂತೆ 100 ವಸತಿ ಶಾಲೆಗಳನ್ನು, ಪದವಿ ಪೂರ್ವ ವಿಭಾಗದ ವಿಜ್ಞಾನ ಮತ್ತು ವಾಣಿಜ್ಯ ಕೋರ್ಸ್ ಗಳನ್ನು ಪ್ರಾರಂಭಿಸಲು ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಲಾಗಿ, ಆರ್ಥಿಕ ಇಲಾಖೆಯು 2023-24 ನೇ ಸಾಲಿನ ಪೂರ್ಣ ಆಯವ್ಯಯದ ನಂತರ ಪ್ರಸ್ತಾವನೆ ಸಲ್ಲಿಸುವಂತೆ ತಿಳಿಸಿರುತ್ತದೆ. ಆರ್ಥಿಕ ಇಲಾಖೆಯು ಪ್ರಸ್ತಾವನೆಗೆ ಅನುಮೋದನೆ ನೀಡಿದ ನಂತರ ಕ್ರಮವಹಿಸಲಾಗುವುದು. |
| ಈ | ಹಾಗಾದಲ್ಲಿ ಇದುವರೆವಿಗೂ ಸದರಿ ಕೋರ್ಸ್ ಗಳನ್ನು ಪ್ರಾರಂಭಿಸದಿರಲು ಹಾಗೂ ಹುದ್ದೆಗಳನ್ನು ಮಂಜೂರು ಮಾಡದಿರಲು ಕಾರಣಗಳೇನು; | |
| ಉ | ಯಾವ ಕಾಲಮಿತಿಯಲ್ಲಿ ಕೋರ್ಸ್‌ಗಳನ್ನು ಪ್ರಾರಂಭಿಸಿ, ಹುದ್ದೆಗಳನ್ನು ಮಂಜೂರು ಮಾಡಲಾಗುವುದು; | |
| ಊ | ಕೆಲವು ಅಧ್ಯಾಪಕರಿಗೆ 10 ವರ್ಷಗಳ ಕಾಲಮಿತಿ ವೇತನ ಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ ಖಾಯಂ ಆಗಿ ನೇಮಕಗೊಂಡ ಬೋಧಕ/ಬೋಧಕೇತರ ಸಿಬ್ಬಂದಿಗಳು 10 ವರ್ಷ ಪೂರೈಸಿದ್ದಲ್ಲಿ, ನಿಗಧಿಪಡಿಸಿದ ಇಲಾಖಾ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರುವ ಮತ್ತು ಯಾವುದೇ ಇಲಾಖಾ ವಿಚಾರಣೆ ಇಲ್ಲದಿರುವ ಅಭ್ಯರ್ಥಿಗಳಿಗೆ ಕಾಲಮಿತಿ ವೇತನ ಬಡ್ತಿ ನೀಡಲಾಗುವುದು. |
| ಋ | ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಕಾಲಮಿತಿ ವೇತನ ಬಡ್ತಿ ನೀಡಲಾಗುವುದು? (ವಿವರ ನೀಡುವುದು) | |

| | | |
|---|---|---|
| | | 10 ವರ್ಷ ಪೂರ್ಣಗೊಳಿಸಿರುವ 3554 ಖಾಯಂ ಬೋಧಕ/ ಬೋಧಕೇತರ ಸಿಬ್ಬಂದಿಗಳಲ್ಲಿ ಅರ್ಹರಿರುವ 3312 ಅಭ್ಯರ್ಥಿಗಳಿಗೆ 10 ವರ್ಷದ ಕಾಲಮಿತಿ ವೇತನ ಬಡ್ತಿ ನೀಡಲಾಗಿದೆ. ಉಳಿದ 242 ಅಭ್ಯರ್ಥಿಗಳು ನಿಗಧಿಪಡಿಸಿರುವ ಅರ್ಹತೆಗಳನ್ನು ಪೂರೈಸಿದ ನಂತರ ಕಾಲಮಿತಿ ವೇತನ ನೀಡಲು ನಿಯಮಾನುಸಾರ ಪರಿಶೀಲಿಸಿ ಕ್ರಮವಹಿಸಲಾಗುತ್ತದೆ. |

ಸಕಇ-ಎಂಡಿಎಸ್/82/2023

(ಡಾ.ಹೆಚ್.ಸಿ. ಮಹದೇವಪ್ಪ )
ಸಮಾಜ ಕಲ್ಯಾಣ ಸಚಿವರು